ಕರ್ನಾಟಕ ಸರ್ಕಾರ

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಮೇ 8, 2020**

**ಪತ್ರಿಕಾ ಪ್ರಕಟಣೆ**

16-MEMBER BOARD OF MANAGEMENT OF THE UNIVERISTY OF AGICULTURAL SCIENCES BENGALURU CONSTITUTED

BENGALURU, MAY 8 ( KARNATAKA INFORMATION ) :

A 16-Member Board of Management of the University of Agricultural Sciences, Bengaluru, has been constituted under the Chairmanship of its Vice Chancellor.

The Registrar of the University is the Member Secretary of this Board, which consists of Principal Secretaries to Government in the Department of Agriculture, Department of Finance and Department of Horticulture as Members, three progressive farmers from the jurisdiction of the university of which one shall be a Scheduled Caste or Scheduled Tribe to be nominated by the State Government, three Members of the State Legislative Assembly to be nominated by its Speaker and one Member of the State Legislative Council to be nominated by its Chairman, to each of the Universities of Bengaluru, Dharwad, Raichur and to the University of Agriculture and Horticulture at Shivamogga on rotation as Ex-officio Members.

The Board also includes Dr P H Ramanjani Gowda, Professor Emeritus of the Indian Council for Agriculture Research and Univeristy of Agricultural Sciences - Eminent Educationist and Expert in Agriculture Sector and Mr T M Aravind, Director of the South India Floriculture Association at Dodda Tumkur Village in

Doddaballapur Taluk in Bengaluru Rural District - both nominated by the Chancellor, one representative from the Indian Council for Agriculture Research to be nominated by its Director General and one Dean to be nominated by the Vice-Chancellor.

The term of the members nominated other than Ex-officio Members to be three years and one third of the members of the Board shall form the quorum, according to a Raj Bhavan Communique.

**************

DPM : YCS

## ಪ್ರಧಾನ್ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಅಡಿಯಲ್ಲಿ ಕರ್ನಾಟಕಕ್ಕೆ ಉಚಿತ ಆಹಾರ ಧಾನ್ಯಗಳ ಪೂರೈಕೆ

**ಬೆಂಗಳೂರು, ಮೇ 8 ( ಕರ್ನಾಟಕ ವಾರ್ತೆ ) :**

ಕರ್ನಾಟಕ ರಾಜ್ಯಕ್ಕೆ ಪ್ರಸಕ್ತ ಏಪ್ರಿಲ್ ನಿಂದ ಜೂನ್ ಮಾಹೆಯವರೆಗೆ ಮೂರು ತಿಂಗಳ ಕಾಲ ಪ್ರಧಾನ್ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ (ಪಿಎಂಜಿಕೆಎವೈ) ಅಡಿಯಲ್ಲಿ ಪ್ರತಿ ತಿಂಗಳಿಗೆ 2.1 ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯಗಳನ್ನು ನಿಗದಿಪಡಿಸಲಾಗಿದೆ, ಇದನ್ನು 4.01 ಕೋಟಿ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅಡಿಯಲ್ಲಿನ (ಎನ್‌ಎಫ್‌ಎಸ್‌ಎ) ಫಲಾನುಭವಿಗಳಿಗೆ ಉಚಿತವಾಗಿ ವಿತರಿಸಲಾಗುತ್ತದೆ. ಕರ್ನಾಟಕದ ಜನರಿಗೆ ಉಚಿತ ಆಹಾರ ಧಾನ್ಯಗಳನ್ನು ಒದಗಿಸಲು 2351 ಕೋಟಿ ರೂಪಾಯಿಗಳ ಒಟ್ಟು ವೆಚ್ಚವನ್ನು ಭಾರತ ಸರ್ಕಾರ ಭರಿಸುತ್ತಿದೆ. ಕರ್ನಾಟಕ ಸರ್ಕಾರ ಈ ಯೋಜನೆಯಡಿ 1735 ಕೋಟಿ ಮೌಲ್ಯದ 4.45 ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯಗಳನ್ನು ಮೇ 7 ರವರೆಗೆ ಎತ್ತುವಳಿ ಮಾಡಿದೆ.

ಲಾಕ್ ಡೌನ್ ಆದಾಗಿನಿಂದ ಕರ್ನಾಟಕವು 302 ರೈಲು ಲೋಡ್ ಅಂದರೆ 8.03 ಲಕ್ಷ ಮೆಟ್ರಿಕ್ ಟನ್ ತೂಕದ ಆಹಾರ ಧಾನ್ಯಗಳನ್ನು ಸ್ವೀಕರಿಸಿದೆ ಎಂದು ಭಾರತ ಆಹಾರ ನಿಗಮದ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಿ.ವಿ.ಪ್ರಸಾದ್ ಅವರು ದೃಢ ಪಡಿಸಿದ್ದಾರೆ, ಇದು ಸುಮಾರು 1.60 ಕೋಟಿ ಚೀಲಗಳ 50 ಕೆಜಿ ಪ್ಯಾಕಿಂಗ್ ಆಗಿದೆ, ಈ ತಿಂಗಳಲ್ಲಿ ಮತ್ತೊಂದು 6.0 ಲಕ್ಷ ಮೆಟ್ರಿಕ್ ಟನ್ ಯನ್ನು ಸ್ವೀಕರಿಸಲಾಗುವುದು. ಭಾರತೀಯ ಆಹಾರ ನಿಗಮದ ಕರ್ನಾಟಕ ಪ್ರದೇಶವು ಪ್ರಧಾನ್ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಮತ್ತು ಸಾಮಾನ್ಯ ರಾಷ್ಟ್ರೀಯ ಆಹಾರ

ಭದ್ರತಾ ಕಾಯ್ದೆ ಅಡಿಯಲ್ಲಿ ರಾಜ್ಯದ ಅಗತ್ಯತೆಗಳನ್ನು ಪೂರೈಸಲು ಇದುವರೆಗೆ ಪ್ರತಿದಿನ 7.48 ಲಕ್ಷ ಚೀಲಗಳನ್ನು ಸ್ವೀಕೃತಿ ವಿತರಣೆಯನ್ನು ಮಾಡಿದೆ.

ಇದೇ ಅವಧಿಯಲ್ಲಿ, ಎನ್‌ಎಫ್‌ಎಸ್‌ಎ ಅಡಿಯಲ್ಲಿ ರಾಜ್ಯ ಸರ್ಕಾರವು 2.54 ಎಲ್‌ಎಂಟಿ ಆಹಾರ ಧಾನ್ಯಗಳನ್ನು ಸಹ ಎತ್ತುವಳಿ ಮಾಡಿದೆ. ವಿವಿಧ ಯೋಜನೆಗಳ ಅಡಿಯಲ್ಲಿ ವಿತರಣೆಗಾಗಿ ಲಾಕ್ ಡೌನ್ ಅವಧಿಯಲ್ಲಿ ಕರ್ನಾಟಕಕ್ಕೆ ಭಾರತ ಸರ್ಕಾರ ಪೂರೈಸಿದ ಒಟ್ಟು ಆಹಾರ ಧಾನ್ಯಗಳ ಪ್ರಮಾಣ 8.51 ಎಲ್‌ಎಂಟಿ, ಇದು ಸುಮಾರು 1.70 ಕೋಟಿ ಚೀಲಗಳ 50 ಕೆಜಿ ಪ್ಯಾಕಿಂಗ್ ಆಗಿದೆ.

ಭಾರತ ಆಹಾರ ನಿಗಮವು ಆಹಾರ ಧಾನ್ಯಗಳ ಖರೀದಿ, ಸಾಗಾಣಿಕೆ ಮತ್ತು ಸಂಗ್ರಹಣೆಯನ್ನು ನಿಕಟವಾಗಿ ಗಮನಿಸುತ್ತಿದೆ ಜೊತೆಗೆ ಪ್ರಧಾನ್ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ ಅಡಿಯಲ್ಲಿ ನೀಡಲಾದ ಎಲ್ಲಾ ಆಹಾರ ಧಾನ್ಯಗಳನ್ನು ರಾಜ್ಯ ಸರ್ಕಾರವು ಸಮಯಕ್ಕೆ ಎತ್ತುವಳಿ ಮಾಡುವಂತೆ ನೋಡಿಕೊಳ್ಳುವುದರಿಂದ ರಾಜ್ಯದಲ್ಲಿ ಆಹಾರ ಧಾನ್ಯಗಳ ಸಮರ್ಪಕ ಲಭ್ಯತೆ ಇರುತ್ತದೆ ಹಾಗೂ ಆಹಾರ ಧಾನ್ಯಗಳು ಲಭ್ಯವಿಲ್ಲದ ಕಾರಣ ಯಾರಿಗೂ, ವಿಶೇಷವಾಗಿ ಯಾವುದೇ ಬಡ ಕುಟುಂಬಕ್ಕೆ ತೊಂದರೆಯಾಗಲು ಅವಕಾಶ ನೀಡುವುದಿಲ್ಲ ಎಂಬ ಉದ್ದೇಶವನ್ನು ಸಾಧಿಸಲು ಸಾಧ್ಯವಾಗುತ್ತದೆ ಎಂದು ಭಾರತ ಆಹಾರ ನಿಗಮದ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಿ.ವಿ.ಪ್ರಸಾದ್ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## Supply of Free food grains to the State under Pradhan Mantri Garib Kalyan Anna Yojana (PMGKAY)

**Bengaluru, May 8 (Karnataka Information)**

For the State of Karnataka, a quantity of 2.1 lakh tonnes of food grains per month has been allotted under **Pradhan Mantri Garib Kalyan Anna Yojana** (PMGKAY) for 3 months from April to June'20, to be distributed free of cost to 4.01 crore National Food Security Act beneficiaries. The total expenditure to the tune of about Rs 2351 Crore for providing free food grains to people of Karnataka is being borne by Government of India. Karnataka Government has so far lifted 4.45 Lakh tonnes food grains valued at Rs 1735 Crore under this scheme up to May

Mr D.V Prasad, Chairman and Managing Director of Food Corporation of India has confirmed that Karnataka has so far received 302 train loads of food grains carrying a qty of 8.03 lakh tonnes which is roughly 1.60 crore bags of 50 kg packing since lockdown, with another 6.0 lakh tonnes planned to be received during this month. The Food Corporation of India Karnataka Region has so far handled 7.48 Lakh bags on daily basis to meet the requirement of the state under **Pradhan Mantri Garib Kalyan Anna Yojana** and regular National Food Security Act.

During the same period, a quantity of 2.54 lakh tonnes food grains has also been lifted by the State Government under National Food Security Act. The total quantity of food grains supplied by Government of India in Karnataka during the lock down period for distribution under various schemes is 8.51 lakh tonnes.(i.e) 1.70 crores bags of 50 kg food grains .

Mr D. V. Prasad has said that Food Corporation of India is closely monitoring the procurement, movement and storing of food grains besides making sure that the State Government lifts all the allotted food grains under **Pradhan Mantri Garib Kalyan Anna Yojana** in time so that there is adequate availability of food grains in the state to achieve the objective that it would not allow anybody, especially any poor family, to suffer on account of non-availability of food grains.

# Corrigendum

**Bengaluru, May 8 (Karnataka Information)**

**Inter-state travel of migrant workers, pilgrims, tourist, students and other persons stranded in different states due to lockdown were permitted to travel through notified entry and exit points of Karnataka**

**The phrase "Those without symptoms will be allowed to enter and have to be in institutional quarantine and those with symptoms will be sent to either Covid-19 Care Center or hospital" in the procedure of return to Karnataka from other state annexed to the above sad order shall be read as "Those without symptoms will go for institutional quarantine if they are from rural area and to home quarantine if they are resident of urban area while those with symptoms will be sent to either Covid-19 Care Center or hospital". Rest of the order remains the same says official press release.**

# ಸಾರಿಗೆ ಪಾಸ್ ವಿತರಣೆ

**ಬೆಂಗಳೂರು, ಮೇ 8 ( ಕರ್ನಾಟಕ ವಾರ್ತೆ )**

**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ರಾಜ್ಯ ಸರ್ಕಾರದ ಆದೇಶದಂತೆ, ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ/ಕೇಂದ್ರ ಸರ್ಕಾರದ ಇಲಾಖೆಗಳು ಹಾಗೂ ಇತರೆ ಅಗತ್ಯ ಸೇವೆಗಳ ಸಿಬ್ಬಂದಿಗಳಿಗೆ, ಸಂಸ್ಥೆಯಿಂದ ಮಾಸಿಕ ಪಾಸ್ ಪಡೆದು, ಇಲಾಖೆ/ಸಂಸ್ಥೆಯ ಗುರುತಿನ ಚೀಟಿಯನ್ನು ತೋರಿಸಿ ಸಾರಿಗೆಗಳಲ್ಲಿ ಪ್ರಯಾಣಿಸಲು ಅನುಮತಿಸಿದೆ.**

**ಕೆಳಕಂಡ ಬಸ್ ನಿಲ್ದಾಣಗಳಲ್ಲಿ ಸಾಮಾನ್ಯ ಮಾಸಿಕ ಪಾಸುಗಳನ್ನು ಮಾಸಿಕ ರೂ 850 ರೂ ದರದಲ್ಲಿ ದಿನಾಂಕ 07/05/2020ರಿಂದ ಪ್ರಯಾಣಿಸಲು ವಿತರಿಸಲಾಗುವುದು. ಅವು ಕೆಂಪೇಗೌಡ ಬಸ್ ನಿಲ್ದಾಣ, ಶಾಂತಿನಗರ ಟಿಟಿಎಂಸಿ, ವಿಜಯನಗರ ಟಿಟಿಎಂಸಿ, ಯಶವಂತಪುರ ಟಿಟಿಎಂಸಿ, ಮಲ್ಲೇಶ್ವರಂ 18ನೇ ಕ್ರಾಸ್, ದೊಮ್ಮಲೂರು ಟಿಟಿಎಂಸಿ, ಬನಶಂಕರಿ ಟಿಟಿಎಂಸಿ, ಜಯನಗರ ಟಿಟಿಎಂಸಿ, ಕೆಂಗೇರಿ ಟಿಟಿಎಂಸಿ, ಯಲಹಂಕ ಉಪನಗರ, ಹೊಸಕೋಟೆ ಹಾಗೂ ಕೋರಮಂಗಲ ಟಿಟಿಎಂಸಿ ಬಸ್ ನಿಲ್ದಾಣ. ಸರ್ಕಾರದ ಇಲಾಖೆಗಳಲ್ಲಿ**

ಹಾಗೂ ಅಂಗ ಸಂಸ್ಥೆಗಳಲ್ಲಿ ಅಗತ್ಯ ಸೇವೆಗಳನ್ನು ಒದಗಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳಿಗೆ ಮಾತ್ರ ಈ ಸೇವೆಯು ಲಭ್ಯವಿದ್ದು ಸಾರ್ವಜನಿಕರಿಗೆ ಇದರಲ್ಲಿ ಪ್ರಯಾಣಿಸಲು ಅನುಮತಿ ಇರುವುದಿಲ್ಲ. ಟಿಕೆಟ್ ಪಡೆದು ಈ ಬಸ್‌ಗಳಲ್ಲಿ ಪ್ರಯಾಣಿಸಲು ಅವಕಾಶವಿಲ್ಲ. ಪ್ರಯಾಣಿಸಲು ಪಾಸ್ ಪಡೆಯುವುದು ಕಡ್ಡಾಯವೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಮೇ 8 ( ಕರ್ನಾಟಕ ವಾರ್ತೆ )**

ನಗರಾಭಿವೃದ್ಧಿ ಸಚಿವ ಬಿ.ಎ. ಬಸವರಾಜ ಅವರು ಮೇ 11 ಮತ್ತು 12 ರಂದು ಬಳ್ಳಾರಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಮೇ 12 ರಂದು ಸಂಜೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ದತ್ತು ಸ್ವೀಕಾರ

**ಬೆಂಗಳೂರು, ಮೇ 8 ( ಕರ್ನಾಟಕ ವಾರ್ತೆ )**

ಶ್ರೀಮತಿ ಸುಮನ ಡಿ ಮೈಸೂರು ರವರು ರೂ.50,000/–ಗಳನ್ನು ಪಾವತಿಸಿ ಶ್ರೀ ಚಾಮರಾಜನಗರ ಮೃಗಾಲಯದ ಜೀಬ್ರಾ ಅನ್ನು ಒಂದು ವರ್ಷದ ಅವಧಿಗೆ ದತ್ತು ಸ್ವೀಕರಿಸಿದ್ದಾರೆ.

## Adoption of Zebra

**Bengaluru, May 8 (Karnataka Information)**

Smt Sumana D. Mysuru has adopted Zebra of Sri Chamarajendra zoological Gardens Mysuru for period of one year by making payment of Rs. 50,000/-

## NIMHANS HELPLINE

**Bengaluru, May 8 (Karnataka Information)**

**The Karnataka Legal Services Authority and Juvenile Justice Committee - High Court of Karnataka has set up a helpline to address mental health concerns of people especially children, women and age person in the situation of Covid-19 pandemic through NIMHANS Helpline 080-46110007.**

## ಕರೋನಾ ನಿಯಂತ್ರಣಕ್ಕೆ ಕೇಂದ್ರದಿಂದ ಹಲವು ಯೋಜನೆಗಳು: ಡಿ.ವಿ.ಸದಾನಂದಗೌಡ

ನವದೆಹಲಿ, ಮೇ 8- ಸಾಂಕ್ರಾಮಿಕ ಕೊರೊನಾ ವೈರಾಣು ಜಗತ್ತಿನಾದ್ಯಂತ ಕಾಳ್ಗಿಚ್ಚಿನಂತೆ ಹರಡತೊಡಗಿದಾಗ ಹೆಚ್ಚು ಆತಂಕಕೊಳ್ಳಬೇಕಾದ ದೇಶ ಯಾವುದಾದರು ಇದ್ದರೆ ಅದು ಭಾರತವಾಗಿತ್ತು. ಹೇಳಿಕೇಳಿ ಹೊಸ ವೈರಾಣು. ಇನ್ನೂವರೆಗೆ ಮದ್ದು ಅಭಿವೃದ್ಧಿಯಾಗಿಲ್ಲ. ನೋಡನೋಡತ್ತಿರುವಂತೆಯೇ ಕೊರೊನಾ ಭಾರತಕ್ಕೂ ಕಾಲಿಟ್ಟಾಗಿತ್ತು. ಯೋಚನೆಮಾಡಿ ನೋಡಿ. 130 ಕೋಟಿಗೂ ಹೆಚ್ಚು ಜನಸಂಖ್ಯೆ ಇರುವ ಭಾರತದಲ್ಲೇನಾದರೂ ಕೊರೊನಾ ಸೋಂಕು ಸಾಂಕ್ರಾಮಿಕವಾಗಿ ಹಬ್ಬಿತು ಎಂದಾದರೆ ಪರಿಸ್ಥಿತಿಯನ್ನು ಊಹಿಸಿಕೊಳ್ಳಲೂ ಸಾಧ್ಯವಿರಲಿಲ್ಲ. ಹಾಗೆಯೇ ಇಡೀ ದೇಶದ ಸಾಮಾಜಿಕ ಆರ್ಥಿಕ ಚಟುವಟಿಕೆಯನ್ನು ಏಕಾಏಕಿ ಸ್ಥಬ್ಧಗೊಳಿಸುವುದೂ ಸುಲಭದ ಮಾತಾಗಿರಲಿಲ್ಲ. ದೇಶದ ಮುಂದಿದ್ದ ಆಯ್ಕೆ ಸೀಮಿತವಾಗಿತ್ತು. ಆದರೆ ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರದ್ದು ನಿರ್ಣಾಯಕ ನಾಯಕತ್ವ. ಜನತಾ ಕರ್ಫ್ಯೂವಿಗೆ ಅಭೂತಪೂರ್ವ ಬೆಂಬಲ ದೊರೆತ ಬೆನ್ನಲ್ಲೇ ಮೋದಿಯವರು ಲಾಕ್ಡೌನ್ನಿನಂತಹ ಕಠಿಣ ನಿರ್ಧಾರ ಕೈಗೊಂಡರು.

ಈಗಿನ ವ್ಯವಸ್ಥೆಯನ್ನು ಸ್ಥಬ್ಧಗೊಳಿಸಿ ಜನಜೀವನಕ್ಕೆ ತೊಂದರೆಯಾಗದಂತೆ ದಿನಬೆಳಗಾಗುವುದರೊಳಗೆ ಹೊಸ ವ್ಯವಸ್ಥೆಯನ್ನು ಸೃಷ್ಟಿಸುವುದು ಸವಾಲಾಗಿತ್ತು. ಸಂಪುಟ ಸಹೋದ್ಯೋಗಿಗಳಿಗೆ ಮೋದಿಯವರ ವೇಗಕ್ಕೆ ಹೆಜ್ಜೆ ಹಾಕುವುದು ಸುಲಭವಾಗಿರಲಿಲ್ಲ. ಎಲ್ಲವೂ ಚಕಚಕನೆ ನಿರ್ಧಾರವಾಗುತ್ತಿದ್ದವು. ತ್ವರಿತ ನಿರ್ಣಯಗಳನ್ನು ಕೈಗೊಳ್ಳಲು ಅನೇಕ ಉನ್ನತಾಧಿಕಾರದ ಕಾರ್ಯದಳಗಳನ್ನು ರಚಿಸಲಾಯಿತು. ರಕ್ಷಣಾ ಸಚಿವ ಶ್ರೀ ರಾಜನಾಥ ಸಿಂಗ್ ಅವರ ಅಧ್ಯಕ್ಷತೆಯಲ್ಲಿ ಹಿರಿಯ ಸಚಿವರ ತಂಡ ರಚಿಸಲಾಯಿತು. ಲಾಕ್ಡೌನಿನಿಂದ ಕೆಲಸ ಕಳೆದುಕೊಂಡು ನಿರುದ್ಯೋಗಿಗಳಾಗುವವರು ಉಪವಾಸ ಬೀಳದಂತೆ ನೋಡಿಕೊಳ್ಳುವುದು, ಜೀವನಾವಶ್ಯಕ ವಸ್ತುಗಳ ಸರಬರಾಜು ಮುಂದುವರಿಸುವುದು ಸಾಮಾನ್ಯವಾದ ಕೆಲಸವಾಗಿರಲಿಲ್ಲ. 1.75 ಲಕ್ಷ ಕೋಟಿ ರೂಪಾಯಿಷ್ಟು ಬೃಹತ್ ಮೊತ್ತದ "ಪ್ರಧಾನಮಂತ್ರಿ ಬಡವರ ಕಲ್ಯಾಣ ಯೋಜನೆ" ಸೇರಿದಂತೆ ಹಲವು ಪರಿಹಾರ ಯೋಜನೆಗಳನ್ನು ಜಾರಿಗೊಳಿಸಲಾಯತು.

ಔದ್ಯೋಗಿಕವಾಗಿ, ಆರ್ಥಿಕವಾಗಿ, ವೈದ್ಯಕೀಯ ಸೌಕರ್ಯಗಳ ದೃಷ್ಟಿಯಿಂದ ಭಾರತಕ್ಕಿಂತ ಬಹಳಷ್ಟು ಮುಂದುವರಿದಿರುವ ಹಾಗೂ ಜನಸಂಖ್ಯೆ ಕಡಿಮೆ ಇರುವ ಅಮೆರಿಕ ಹಾಗೂ ಇಟಲಿ, ಪ್ರಾನ್ಸ್, ಜರ್ಮನಿ, ಸ್ಪೇನ್ ಮುಂತಾದ ಔರೋಪ್ಯ ದೇಶಗಳಲ್ಲಿ ಲಕ್ಷಾಂತರ ಜನ ಕೊರೊನಾಕ್ಕೆ ಬಲಿಯಾಗಿದ್ದಾರೆ. ಇ೦ತಹ ಸಂದರ್ಭದಲ್ಲಿ ಭಾರತವು ಕಳೆದ 6 ವಾರಗಳಲ್ಲಿ ಕೊರೋನಾ ಸೋಂಕು ಹಾಗೂ ಲಾಕ್ಡೌನ್ ಪರಿಣಾಮಗಳನ್ನು ನಿರ್ವಹಿಸಿದ ರೀತಿಗೆ ಇಡೀ ವಿಶ್ವವೇ ತಲೆದೂಗಿದೆ.

ಕೊರೊನಾ ಸೋಂಕಿತರ ಸಂಖ್ಯೆಯನ್ನು ನಿರ್ವಹಿಸಬಹುದಾದ ಮಿತಿಯಲ್ಲಿ ಇಡುವಲ್ಲಿ ಲಾಕ್ಡೌನ್ ಯಶಸ್ವಿಯಾಗಿದೆ. ಬಹುತೇಕ ಜನ ಲಾಕ್ಡೌನ್ ನಿಯಮಗಳನ್ನು ಪಾಲಿಸಿ ಕೊರೊನಾ ವಿರುದ್ಧ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು

ನಡೆಸುತ್ತಿರುವ ಹೋರಾಟದಲ್ಲಿ ಕೈಜೋಡಿಸಿದ್ದಾರೆ. ಉಳಿದವರೂ ಸಹಕರಿಸಿದ್ದರೆ ಕೋರೊನಾ ಮಹಾಮಾರಿ ಇಷ್ಟೊತ್ತಿಗೆ ಬಹುಶಃ ದೇಶದಿಂದಲೇ ಮಾಯವಾಗಿರುತ್ತಿತ್ತೇನೋ.

ದೇಶವು ಲಾಕ್ಡೌನಿನ 3ನೇ ಹಂತವನ್ನು ಪ್ರವೇಶಿಸಿಯಾಗಿದೆ. ಮೊದಲೆರಡು ಹಂತದಲ್ಲಿ ಕೈಗೊಳ್ಳಲಾದ ಕ್ರಮಗಳ ಪರಾಮರ್ಶೆ ನಡೆದಿದೆ. ಪ್ರಮುಖ ಇಲಾಖೆಗಳೆಲ್ಲ ತಮ್ಮ ಜವಾಬ್ಧಾರಿಯನ್ನು ಹೇಗೆ ನಿಭಾಯಿಸಿವೆ? ಒಂದು ರೀತಿಯಲ್ಲಿ "ಕೊರೊನಾ ಪರೀಕ್ಷೆಯ" ಮೌಲ್ಯಮಾಪನ ಎನ್ನಬಹುದು. ಗಮನಾರ್ಹ ಸಂಗತಿಯೆಂದರೆ ಬಹುತೇಕ ಇಲಾಖೆಗಳು ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಕೇಂದ್ರ ನಾಯಕತ್ವದಿಂದ ಸೈ ಅನಿಸಿಕೊಂಡಿವೆ. ಹೀಗೆ "ಕೊರೊನಾ ಪರೀಕ್ಷೆ"ಯಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣವಾದ ಇಲಾಖೆಗಳ ಪೈಕಿ ಕರ್ನಾಟಕದ ಮಾಜಿ ಮುಖ್ಯಮಂತ್ರಿ ಶ್ರೀ ಡಿ ವಿ ಸದಾನಂದ ಗೌಡ ಅವರು ನಿರ್ವಹಿಸುವ ರಾಸಾಯನಿಕ ಹಾಗೂ ರಸಗೊಬ್ಬರ ಇಲಾಖೆಯೂ ಒಂದು.

ಸಾಂಕ್ರಾಮಿಕ ರೋಗದಿಂದ ಉಂಟಾಗಿರುವ ವಿಷಮ ಸ್ಥಿತಿ ಹಿನ್ನೆಲೆಯಲ್ಲಿ ರಾಸಾಯನಿಕ ಹಾಗೂ ರಸಗೊಬ್ಬರ ಇಲಾಖೆಗೆ ಸಹಜವಾಗಿಯೇ ಮಹತ್ವ ಹೆಚ್ಚಿದೆ. ಯಾಕೆಂದರೆ, ಜೀವರಕ್ಷಕ ಔಷಧ ಉದ್ಪಾದನೆ ಮತ್ತು ಸರಬರಾಜಿನ ಜವಾಬ್ಧಾರಿ ಇಲಾಖೆಯದ್ದೇ. ಕೊರೊನಾ ರೋಗಕ್ಕೆ ಸದ್ಯಕ್ಕೆ ಲಭ್ಯವಿರುವ ಸಂಜೀವಿನಿ ಅಂದರೆ ಹೈಡ್ರೋಕ್ಸಿಕ್ಲೋರೋಕ್ವಿನ್, ಪೆರಾಸಿಟೊಮೊಲ್ (Paracetamol)ನಂತಹ ಮಾತ್ರೆಗಳೇ. ಇವುಗಳನ್ನು ಉತ್ಪಾದಿಸುವ ಜಗತ್ತಿನ ಪ್ರಮುಖ ರಾಷ್ಟ್ರ ಭಾರತ. ಹಾಗಾಗಿ ಅಮೆರಿಕ, ಬ್ರೆಜಿಲ್, ಇಂಗ್ಲೆಂಡ್, ಇಟಲಿ, ಫ್ರಾನ್ಸ್, ಜರ್ಮನಿ, ಸ್ಪೇನ್ ಮುಂತಾದ ದೇಶಗಳಿಂದ ಈ ಎರಡು ಔಷಧಗಳಿಗಾಗಿ ಭಾರಿ ಬೇಡಿಕೆಯಿತ್ತು. ಹಾಗೆಯೇ ದೇಶದ ಆಂತರಿಕ ಬೇಡಿಕೆಯನ್ನೂ ಆದ್ಯತೆ ಮೇರೆಗೆ ಪೂರೈಸಬೇಕಿತ್ತು.

ಜೊತೆಗೇ ದೇಶಾದ್ಯಂತ ಇರುವ ಸುಮಾರು ಆರು ಸಾವಿರ ಜನೌಷಧ ಕೇಂದ್ರಗಳಿಗೆ ರಿಯಾಯಿತಿ ದರದಲ್ಲಿ ಔಷಧಗಳ ಪೂರೈಕೆ ನಿರಂತರವಾಗಿರುವಂತೆ ನೋಡಿಕೋಳ್ಳಬೇಕು. ಮತ್ತೆ, ರಸಗೊಬ್ಬರ - ಕೃಷಿ ಚಟುವಟಿಕೆಯ ಅವಿಭಾಜ್ಯ ಅಂಗ, ರೈತರ ಜೀವನಾಡಿ. ಹೀಗಾಗಿ ಎಲ್ಲರ ಗಮನ ರಾಸಾಯನಿಕ ಹಾಗೂ ರಸಗೊಬ್ಬರ ಇಲಾಖೆಯ ಕಡೆಯಿತ್ತು.

ಲಾಕ್ಡೌನ್ ಘೋಷಣೆಯಾದಾಗ ರಸಗೊಬ್ಬರ ವಿಚಾರವಾಗಿ ಹೆಚ್ಚು ಆತಂಕಕ್ಕೊಳಗಾದವರು ಬಹುಶಃ ರಾಜ್ಯದ ಚುಕ್ಕಾಣಿ ಹಿಡಿದವರು. ಸಾಗಣೆಯಲ್ಲಿ ಉಂಟಾಗಿರುವ ಅಡಚಣೆ, ಕೂಲಿಗಳ ಕೊರತೆಯಿಂದ ಮುಂಗಾರು ಹಂಗಾಮಿಗೆ ರಸಗೊಬ್ಬರ ಕೊರತೆ ಉಂಟಾಗಬಹುದು ಎಂಬುದು ಅವರ ಆತಂಕವಾಗಿತ್ತು. ಆದರೆ ರಸಗೊಬ್ಬರ ಇಲಾಖೆಯು ಈ ಎಲ್ಲ ಲೆಕ್ಕಾಚಾರವನ್ನ ತಲೆಕೆಳಗಾಗಿಸಿದೆ. ಬಹುತೇಕ ಅಡಚಣೆಗಳನ್ನು ನಿವಾರಿಸಿಕೊಂಡು ದೇಶದ ಮೂಲಮೂಲೆಗೂ ಸಾಕಷ್ಟು ರಸಗೊಬ್ಬರವನ್ನು ಸಾಗಣೆ ಮಾಡುವಲ್ಲಿ ಇಲಾಖೆ ಯಶ ಕಂಡಿದೆ. ಸದ್ಯ ಎಲ್ಲ ರಾಜ್ಯಗಳ ಗೋದಾಮುಗಳಲ್ಲಿ, ಸಗಟು ಮಳಿಗೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚೇ ರಸಗೊಬ್ಬರ ಸಂಗ್ರಹವಾಗಿದೆ. ಇಂತಹ ಸಂದಿಗ್ಧ ಕಾಲದಲ್ಲಿಯೂ ಸಚಿವಾಲಯ ಕಾರ್ಯನಿರ್ವಹಿಸಿದ ರೀತಿಗೆ ರಾಜ್ಯ ಸರ್ಕಾರಗಳಿಂದ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ. ಕೆಲ ರಾಜ್ಯಗಳ ಮುಖ್ಯಮಂತ್ರಿಗಳು ಖುದ್ದು ಕರೆಮಾಡಿ ಸಚಿವರಿಗೆ ಧನ್ಯವಾದ ಹೇಳಿದ್ದಾರೆ.

ಕೊರೊನಾ ಸೋಂಕಿನ ಋಣಾತ್ಮಕ ಸುದ್ದಿಯನ್ನು ಕೇಳಿಕೇಳಿ ಬೇಸತ್ತಿರುವ ದೇಶದ ಜನ ಸಂಭ್ರಮಿಸುವ ವಿಚಾರವೊಂದಿದೆ. ಬಂಪರ್ ಮುಂಗಾರು ಬೆಳೆಯ ಮುನ್ಸೂಚನೆ ಸಿಕ್ಕಿದೆ. ರೈತರು ಮುಂಗಾರು ಬಿತ್ತನೆಗೆ ಭರ್ಜರಿ ತಯಾರಿ ನಡೆಸಿದ್ದಾರೆ.

ಕಳೆದ ಏಪ್ರಿಲ್ ತಿಂಗಳಲ್ಲಿ ರೈತರು ಖರೀದಿಸಿದ ರಸಗೊಬ್ಬರ ಪ್ರಮಾಣಲ್ಲಿ 2019ರ ಏಪ್ರಿಲ್ ತಿಂಗಳಿಗೆ ಹೋಲಿಸಿದರೆ ಶೇಕಡಾ 49ರಷ್ಟು ಭಾರೀ ಏರಿಕೆ ಕಂಡುಬಂದಿರುವುದೇ ಇದಕ್ಕೆ ಸಾಕ್ಷಿ. ರೈತರು 2019ರ ಏಪ್ರಿಲ್ ತಿಂಗಳಲ್ಲಿ 11.93 ಲಕ್ಷ ಟನ್ ರಸಗೊಬ್ಬರ (ಯೂರಿಯಾ, ಡಿಎಪಿ ಹಾಗೂ ಕಾಂಪ್ಲೆಕ್ಸ್ ಸೇರಿ) ಖರೀದಿಸಿದ್ದರು. ಅದೇ ರೈತರು ಮೊನ್ನೆ ಮುಗಿದ ಏಪ್ರಿಲ್‌ನಲ್ಲಿ 17.82 ಲಕ್ಷ ಟನ್ ರಸಗೊಬ್ಬರ ಖರೀದಿಸಿದ್ದಾರೆ. ಇನ್ನು, ಉತ್ಪಾದಕರು (ಕಾರ್ಖಾನೆಗಳು) ಸಗಟು ಡೀಲರುಗಳಿಗೆ ಪೂರೈಸಿದ ರಸಗೊಬ್ಬರ ಪ್ರಮಾಣದಲ್ಲಿಯೂ ಶೇಕಡಾ 47ರಷ್ಟು ಹೆಚ್ಚಳವಾಗಿದೆ. ಕಾರ್ಖಾನೆಗಳು 2019ರ ಏಪ್ರಿಲ್‌ನಲ್ಲಿ ಡೀಲರುಗಳಿಗೆ 22.43 ಲಕ್ಷ ಟನ್ ರಸಗೊಬ್ಬರ ಪೂರೈಸಿದ್ದವು. ಅದು ಈ ಸಲ (2020 ಏಪ್ರಿಲ್) 32.9 ಲಕ್ಷ ಟನ್ ತಲುಪಿದೆ.

ಹಾಗಾದರೆ ಇವೆಲ್ಲ ಸಾಧ್ಯವಾಗಿದ್ದು ಹೇಗೆ? ಸಚಿವ ಶ್ರೀ ಸದಾನಂದ ಗೌಡ ಅವರ ಮಾತಲ್ಲೇ ಕೇಳಿ - "ಮುಂಗಾರು ಬಿತ್ತನೆಗೆ ತಯಾರಿ ನಡೆದಿತ್ತು. ಸ್ವಲ್ಪವೇ ಮೈಮರೆತರೂ ಆಹಾಕಾರ ಏಳುತ್ತಿತ್ತು. ಪ್ರತಿನಿತ್ಯ 1 ಲಕ್ಷ ಟನ್ (10 ಲಕ್ಷ ಕ್ವಿಂಟಲ್) ಮೇಲ್ಪಟ್ಟು ರಸಗೊಬ್ಬರವನ್ನು ಕಾರ್ಖಾನೆಗಳಿಂದ, ಬಂದರುಗಳಿಂದ ಬೇರೆಬೇರೆ ರಾಜ್ಯಗಳಲ್ಲಿನ ಗೋದಾಮುಗಳಿಗೆ, ಗೂಡ್ಸ್‌ಶೆಡ್ಡುಗಳಿಗೆ ಸಾಗಣೆ ಮಾಡಬೇಕಿತ್ತು. ಸುಮಾರು ಅಷ್ಟೇ ಪ್ರಮಾಣದಲ್ಲಿ ಕಾರ್ಖಾನೆಗಳಿಗೆ ಕಚ್ಚಾವಸ್ತುಗಳ ಪೂರೈಕೆ ನಿರಂತರವಾಗಿ ನಡೆಯುತ್ತಿರುವಂತೆ ವ್ಯವಸ್ಥೆ ಮಾಡಬೇಕು. ಈ ಸರಕುಗಳ ಲೋಡಿಂಗ್, ಅನ್‌ಲೋಡಿಂಗ್ ಆಗಬೇಕು. ರೇಲ್ವೆ ಸಚಿವಾಲಯದ ಸಹಯೋಗದಿಂದ ಅಗತ್ಯವಿರುವಷ್ಟು ರೇಕ್‌ಗಳನ್ನು (ಗೂಡ್ಸ್ ಟ್ರೇನುಗಳು) ದೊರೆಕಿಸಿಕೊಂಡಿದ್ದಾಯಿತು. ಆದರೆ ಕೂಲಿಗಳನ್ನು ಹೊಂದಿಸುವುದು ದೊಡ್ಡ ಸವಾಲಾಯಿತು. ಉನ್ನತಾಧಿಕಾರಿಗಳ ಕಾರ್ಯದಳವೊಂದನ್ನು ರಚಿಸಿ ರಾಜ್ಯ ಸರ್ಕಾರಗಳು, ಜಿಲ್ಲಾಡಳಿತಗಳು ಹಾಗೂ ಭದ್ರತಾ ಅಧಿಕಾರಿಗಳ ಜೊತೆ ನಿರಂತರವಾಗಿ ಚರ್ಚಿಸಿ ಬಹುತೇಕ ಅಡಚಣೆಗಳನ್ನೆಲ್ಲ ನಿವಾರಿಸಲಾಯಿತು. ಆರಂಭದ ದಿನಗಳಲ್ಲಿ ರಸಗೊಬ್ಬರ ಹೊತ್ತ ಟ್ರೇನುಗಳು ಗೂಡ್ಸ್‌ಶೆಡ್‌ಗಳಲ್ಲಿ ಕೂಲಿಗಳ ಕೊರತೆಯಿಂದ ಅನ್‌ಲೋಡ್ ಮಾಡಲಾಗದೆ ಮೂರ್ನಾಲ್ಕು ದಿನಗಳ ಕಾಲ ಕಾಯುವ ದುಃಸ್ಥಿತಿ ಇತ್ತು. ಆದರೆ ಬರಬರುತ್ತ ಪರಿಸ್ಥಿತಿ ಸುಧಾರಿಸುತ್ತ ಬಂತು. ಮಾರ್ಚ್ 22ರಿಂದ ಏಪ್ರಿಲ್ 30ರವರೆಗೆ 40 ದಿನಗಳ ಅವಧಿಯಲ್ಲಿ 1251 ರೇಕ್‌ಗಳಷ್ಟು ರಸಗೊಬ್ಬರ (ಅಂದಾಜು 40 ಲಕ್ಷ ಟನ್) ದೇಶದ ಬೇರೆಬೇರೆ ಭಾಗಗಳಿಗೆ ಸಾಗಣೆಯಾಗಿದೆ. ರೈತರು ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರ ಖರೀದಿಸುತ್ತಿದ್ದಾರೆ. ಇಂದು ಎಲ್ಲ ರಾಜ್ಯಗಳಲ್ಲಿಯೂ ತಿಂಗಳ ಸರಾಸರಿ ಬೇಡಿಕೆಗಿಂತ 2ರಿಂದ 3 ಪಟ್ಟು ಜಾಸ್ತಿ ರಸಗೊಬ್ಬರ ದಾಸ್ತಾನಿದೆ."

"ಇದಕ್ಕೆ ಒಂದೆರಡು ಅಂಶಗಳು ಪೂರಕವಾಗಿ ಕೆಲಸ ಮಾಡಿವೆ. ಒಂದನೆಯದಾಗಿ ಸರಕುಸಾಗಣೆ ವ್ಯವಸ್ಥೆಯನ್ನು ತ್ವರಿತವಾಗಿ ಮರುಸ್ಥಾಪನೆ ಮಾಡಿ ಅಗತ್ಯ ಕಾರ್ಮಿಕ ವೃಂದವನ್ನು ಹೊಂದಿಸಿದ್ದು. ಇದಕ್ಕೆ ಎಲ್ಲ ಇಲಾಖೆಗಳು ವಿಶೇಷವಾಗಿ ರೇಲ್ವೆ ಇಲಾಖೆ ಹಾಗೂ ರಾಜ್ಯ ಸರ್ಕಾರಗಳು ಪೂರ್ಣ ಸಹಕಾರ ನೀಡಿವೆ. ಇನ್ನೊಂದು ಪ್ರಮುಖ ಕಾರಣ - ನಮ್ಮ ಇಲಾಖೆಯು ಮುಂಗಾರು ಹಂಗಾಮಿನ ಸಬ್ಸಿಡಿ ಹಣವನ್ನು ಪೂರ್ತಿಯಾಗಿ ಹಣಕಾಸು ವರ್ಷದ ಆರಂಭದಲ್ಲಿಯೇ ವರ್ಗಾವಣೆ ಮಾಡಿದ್ದು. ಕಳೆದ ತಿಂಗಳು ಒಟ್ಟು 21,115.48 ಕೋಟಿ ರೂಪಾಯಿ ಸಬ್ಸಿಡಿ ಹಣವನ್ನು ಬಿಡುಗಡೆ ಮಾಡಲಾಗಿದೆ. ಇದೊಂದು ದಾಖಲೆ. ಯಾಕೆಂದರೆ ಇಲಾಖೆಯ ಇತಿಹಾಸದಲ್ಲಿ ಇದೇ ಮೊದಲಬಾರಿಗೆ ಏಪ್ರಿಲ್ ತಿಂಗಳಲ್ಲಿ ಇಷ್ಟೊಂದು ಬೃಹತ್ ಮೊತ್ತದ ಸಬ್ಸಿಡಿ ಬಿಡುಗಡೆ ಮಾಡಲಾಯಿತು. ಇದರಿಂದ ಸಹಜವಾಗಿಯೇ ಉತ್ಪಾದನೆ ಮತ್ತು ಸರಬರಾಜು ಸೇರಿದಂತೆ ಈ ವಲಯದ ಒಟ್ಟಾರೆ ಆರ್ಥಿಕ ಚಟುವಟಿಕೆಗೆ ಉತ್ತೇಜನ ದೊರೆಯಿತು. ಉದಾಹರಣೆಗೆ

ನಮ್ಮದೇ ಇಲಾಖೆಯಡಿ ಕೆಲಸ ಮಾಡುವ ರಾಷ್ಟ್ರೀಯ ರಸಗೊಬ್ಬರ ಕಾರ್ಖಾನೆಯನ್ನು (ಎನ್. ಎಫ್. ಎಲ್.) ತೆಗೆದುಕೊಳ್ಳಿ. ಅದಕ್ಕೆ ವಾರ್ಷಿಕವಾಗಿ 37.43 ಲಕ್ಷ ಟನ್ ಯೂರಿಯಾ ಉತ್ಪಾದನೆಯ ಗುರಿ ನೀಡಲಾಗಿದೆ. ಅಂದರೆ ತಿಂಗಳಿಗೆ ಸರಾಸರಿ 3.12 ಲಕ್ಷ ಟನ್ ಉತ್ಪಾದನೆ ಮಾಡಬೇಕು. ಆದರೆ ಸಕಾಲದಲ್ಲಿ ಹಣ ಲಭ್ಯವಾದ್ದರಿಂದ ಎನ್. ಎಫ್. ಎಲ್. ಕಳೆದ ಏಪ್ರಿಲ್ ತಿಂಗಳಲ್ಲಿ 3.22 ಲಕ್ಷ ಟನ್ ಯೂರಿಯಾ ಉತ್ಪಾದನೆ ಮಾಡಲು ಸಾಧ್ಯವಾಯಿತು."

"ಲಾಕ್‌ಡೌನ್ ಅಡಚಣೆಯ ಮಧ್ಯೆಯೇ ನಾವು ಔಷಧ ಉತ್ಪಾದನೆಯಲ್ಲೂ ಗುರುತರ ಸಾಧನೆ ಮಾಡಿದ್ದೇವೆ. ಜಗತ್ತಿನ ಎಲ್ಲ ದೇಶಗಳಿಂದ ಬೇಡಿಕೆಯಲ್ಲಿರುವ ಹೈಡ್ರಾಕ್ಸಿಕ್ಲೊರೊಕ್ವಿನ್ ಮಾತ್ರೆ ಉತ್ಪಾದನೆ ದ್ವಿಗುಣಗೊಳಿಸಲಾಗಿದೆ. ಕಳೆದ ಏಪ್ರಿಲ್ ತಿಂಗಳಲ್ಲಿ 30 ಕೋಟಿ ಮಾತ್ರೆಗಳನ್ನು ಉತ್ಪಾದಿಸಿದ್ದೇವೆ. ಇದು ಮಾಮೂಲಿ ಉತ್ಪಾದನೆಗಿಂತ ಎರಡುಪಟ್ಟು ಜಾಸ್ತಿ. 15 ಕೋಟಿ ಮಾತ್ರೆಗಳನ್ನು ದೇಶದ ಆಂತರಿಕ ಉಪಯೋಗಕ್ಕೆ ಇಟ್ಟುಕೊಂಡು ಉಳಿದದ್ದನ್ನು (15 ಕೋಟಿ) ರಫ್ತು ಮಾಡಲು ಅವಕಾಶ ನೀಡಲಾಗಿದೆ. ಪೆರಾಸೆಟೊಮೊಲ್ ಮಾತ್ರೆ ಉತ್ಪಾದನೆಯೂ ಗಣನೀಯವಾಗಿ ಹೆಚ್ಚಳವಾಗಿದೆ. ಅದೇ ರೀತಿ ಅಜಿತ್ರೋಮೈಸಿನ್ ಉತ್ಪಾದನೆಯನ್ನೂ ಹೆಚ್ಚಿಸಲಾಗಿದೆ. ಏಪ್ರಿಲ್ ತಿಂಗಳಲ್ಲಿ **500 mg**ಯ **15** ಕೋಟಿ ಅಜಿತ್ರೋಮೈಸಿನ್ ಮಾತ್ರೆ ಉತ್ಪಾದನೆಗೊಂಡಿದೆ."

" ಔಷಧ ಕೊರತೆ, ಹೆಚ್ಚುವರಿ ದರ ವಸೂಲಿ ಇವೇ ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ಏನಾದರೂ ದೂರುಗಳಿದ್ದರೆ ಅದನ್ನು ಬಗೆಹರಿಸಲು ದಿನದ 24 ತಾಸೂ ಕಾರ್ಯನಿರ್ವಹಿಸುವ ನಿಯಂತ್ರಣ ಕೇಂದ್ರ ಸ್ಥಾಪಿಸಿದ್ದೇವೆ. ಸಾರ್ವಜನಿಕರು, ಅಂಗಡಿಕಾರರು ದೂರವಾಣಿ ಸಂಖ್ಯೆ **1800111255** ಕ್ಕೆ ಉಚಿತ ಕರೆ ಮಾಡಬಹುದು. ಇನ್ನು, ಲಾಕ್‌ಡೌನ್ ಅಡಚಣೆಯಿಂದ ಅಸ್ತವ್ಯಸ್ತಗೊಂಡಿದ್ದ ಔಷಧ ಸರಬರಾಜು ವ್ಯವಸ್ಥೆಯನ್ನು ಬಹುತೇಕ ಮರುಸ್ಥಾಪಿಸಿದ್ದೇವೆ."

"ಲಾಕ್‌ಡೌನ್ನಿನ ಆರಂಭದಲ್ಲಿ ಸರಕು ಸಾಗಣೆ ಹಾಗೂ ಕೊರಿಯರ್ ಸೇವೆಗಳು ಬಂದಾಗಿದ್ದರಿಂದ ನಮ್ಮ ಜನೌಷಧ ಕೇಂದ್ರಗಳಿಗೆ ವಿಶೇಷವಾಗಿ ಒಳನಾಡಿನ ಕೇಂದ್ರಗಳಿಗೆ ಔಷಧಗಳ ಸರಬರಾಜು ವ್ಯತ್ಯಯಗೊಂಡಿತ್ತು. ಆದರೆ ಎರಡನೇ ವಾರದ ವೇಳೆಗೆ ಬದಲಿ ವ್ಯವಸ್ಥೆಯ ಮೂಲಕ ಸರಬರಾಜನ್ನು ಬಹುತೇಕ ಸರಿಪಡಿಸಲಾಯಿತು. ಈಗ ಇಂಡಿಯಾ ಪೋಸ್ಟ್ ಜೊತೆಗೂ ಒಡಂಬಡಿಕೆ ಮಾಡಿಕೊಂಡಿದ್ದೇವೆ. ಈಚಿನ ವಾರಗಳಲ್ಲಿ ಜನೌಷಧ ಕೇಂದ್ರಗಳಿಗೆ ಸುಮಾರು 1.8 ಕೋಟಿ ಹೈಡ್ರೊಕ್ಸಿಕ್ಲೋರೋಕ್ವಿನ್ ಮಾತ್ರೆಗಳನ್ನು ಸರಬರಾಜು ಮಾಡಲಾಗಿದೆ"

"ಸದ್ಯ 745 ಮಾದರಿಯ ಔಷಧಗಳು ಹಾಗೂ 108 ನಮೂನೆಯ ಶಸ್ತ್ರಚಿಕಿತ್ಸಾ ಉಪಕರಣಗಳು ಜನೌಷಧಿ ಕೇಂದ್ರಗಳಲ್ಲಿ ಲಭ್ಯ ಇವೆ. ನಿಜ ಹೇಳಬೇಕೆಂದರೆ ನಮ್ಮ ಜನೌಷಧಿ ಕೇಂದ್ರಗಳು ಲಾಕ್‌ಡೌನ್ ಅವಧಿಯಲ್ಲಿ ದಾಖಲೆ ವಹಿವಾಟು ನಡೆಸಿವೆ. ಏಪ್ರಿಲ್ ತಿಂಗಳಲ್ಲಿ 52 ಕೋಟಿ ರೂಪಾಯಿ ಔಷಧ ಮಾರಾಟವಾಗಿದೆ. ಇದು ಕಳೆದ ವರ್ಷದ ಇದೇ ಸಮಯಕ್ಕೆ ಹೋಲಿಸಿದರೆ ಸುಮಾರು ಎರಡೂವರೆ ಪಟ್ಟು ಜಾಸ್ತಿ."

"ಒಟ್ಟಿನಲ್ಲಿ, ಇಲ್ಲಿತನಕ ಎಲ್ಲವೂ ಸುಸೂತ್ರವಾಗಿ ನಡೆದಿವೆ. ಕೊರೊನೋತ್ತರ ಅವಧಿಯಲ್ಲಿ ಆಗಬೇಕಾದ ಕೆಲಸಗಳ ಬಗ್ಗೆಯೂ ಯೋಚಿಸಿದ್ದೇವೆ. ಅದು ಯಾವುದೇ ಆಟವಿರಲಿ. ಆಟಗಾರರು ಉತ್ತಮವಾಗಿದ್ದರಷ್ಟೇ ಸಾಲದು. ಒಬ್ಬ ಉತ್ತಮ ನಾಯಕ ಬೇಕು. ನಮಗೆ ಅಂತಹ ನಾಯಕ ಇದ್ದಾರೆ. ಪ್ರಧಾನಿ ಶ್ರೀ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ

ನಾವೆಲ್ಲ ಒಂದು ತಂಡವಾಗಿ ಕಾರ್ಯನಿರ್ವಹಿಸುತ್ತಿದ್ದೇವೆ. ಅವರ ನಾಯಕತ್ವದಲ್ಲಿ ದೇಶವು ಇದುವರೆಗೂ ಕೊರೊನಾ ಮಹಾಮಾರಿಯನ್ನು ಸಮರ್ಥವಾಗಿ ಎದುರಿಸಿದೆ.”

“ಆದರೆ ಈ ಜೈವಿಕ ಯುದ್ಧ ಇನ್ನೂ ಮುಗಿದಿಲ್ಲ. ನಾವ್ಯಾರೂ ಮೈಮರೆಯುವುದು ಬೇಡ. ಇನ್ನಷ್ಟು ಕಾಲ ಖಡ್ಡಾಯವಾಗಿ ಮುಖಗವಸು ಧರಿಸೋಣ. ಸೋಂಕು ನಿವಾರಕ ದ್ರಾವಣ ಬಳಸೋಣ. ನಾಲ್ಕುಜನ ಸೇರುವ ಸ್ಥಳಗಳಲ್ಲಿ ಕನಿಷ್ಠ ನಾಲ್ಕು ಅಡಿ ಭೌತಿಕ ಅಂತರವನ್ನು ಕಾಪಾಡಿಕೊಳ್ಳುವ ಸಂಕಲ್ಪ ಮಾಡೋಣ. ಜವಾಬ್ಧಾರಿಯುತ ನಾಗರಿಕರಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಆಗಾಗ ನೀಡುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸೋಣ. ದೇಶ ಈ ಯುದ್ಧವನ್ನು ಗೆಲ್ಲಬೇಕಾದರೆ ನಿಮ್ಮೆಲ್ಲರ ಸಂಪೂರ್ಣ ಸಹಕಾರ, ಸಹಭಾಗಿತ್ವ ಬೇಕು. ನಮಗೆ ಸಂಪೂರ್ಣ ವಿಶ್ವಾಸವಿದೆ. ಎಲ್ಲವೂ ಶುಭಾಂತ್ಯವಾಗಲಿದೆ” ಎಂದು ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಶ್ರೀ ಸದಾನಂದ ಗೌಡ ಹೇಳಿದರು.

## ಆಂಗ್ಲ ಮಾಧ್ಯಮದಲ್ಲೂ ಎಸ್.ಎಸ್.ಎಲ್.ಸಿ. ಪುನರ್‌ಮನನ ತರಗತಿ

**ಬೆಂಗಳೂರು, ಮೇ 8 ( ಕರ್ನಾಟಕ ವಾರ್ತೆ )**

ಏಪ್ರಿಲ್ 29ರಿಂದ ಚಂದನ ವಾಹಿನಿಯಲ್ಲಿ ಆರಂಭಿಸಲಾಗಿರುವ ಎಸ್ ಎಸ್ ಎಲ್ ಸಿ ಪುನರ್ಮನನ ತರಗತಿಗಳನ್ನು ಆಂಗ್ಲ ಮಾಧ್ಯಮದಲ್ಲಿಯೂ ಸಹ ಮೇ 9ರಿಂದ ಪ್ರಾರಂಭಿಸಲಾಗುತ್ತಿದೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ತಿಳಿಸಿದ್ದಾರೆ.

ಕನ್ನಡ ಮಾಧ್ಯಮದಲ್ಲಿ ಆರಂಭಿಸಲಾಗಿರುವ ಪುನರ್ಮನನ ತರಗತಿಗಳನ್ನು ರಾಜ್ಯದ ವಿದ್ಯಾರ್ಥಿ ಸಮೂಹ ಬೃಹತ್ ಮಟ್ಟದಲ್ಲಿ ಸದುಪಯೋಗಪಡಿಸಿಕೊಳ್ಳುತ್ತಿದ್ದು, ಆಂಗ್ಲ ಮಾಧ್ಯಮ ವಿದ್ಯಾರ್ಥಿಗಳಿಗೂ ಉಪಯೋಗವಾಗುವಂತೆ ಪುನರ್ಮನನ ತರಗತಿಗಳನ್ನು ಆರಂಭಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ.

ಮುಂದಿನ 30 ದಿನಗಳ ಅವಧಿಯಲ್ಲಿ ಮೊದಲ 16 ದಿನ ಗಣಿತ ಹಾಗೂ ವಿಜ್ಞಾನ, ನಂತರದ 10 ದಿನ ಸಮಾಜ ವಿಜ್ಞಾನ ತರಗತಿಗಳನ್ನುಆಂಗ್ಲಮಾಧ್ಯಮದಲ್ಲಿ ಬೋಧಿಸಲಾಗುತ್ತಿದೆ. ಸಮಾಜ ವಿಜ್ಞಾನ ಬೋಧನೆ ಪೂರ್ಣಗೊಂಡ ಬಳಿಕ 6 ದಿನಗಳ ಕಾಲ ಹಿಂದಿ, ಸಂಸ್ಕೃತ ಹಾಗೂ ಉರ್ದು ಮೊದಲ ಭಾಷೆಗಳ ತರಗತಿಗಳನ್ನೂ ಸಹ ಬೋಧಿಸಲಾಗುವುದು ಎಂದು ಸಚಿವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಮೇ 9ರಿಂದ ಪ್ರತಿದಿನ ಬೆಳಗ್ಗೆ 9.30ರಿಂದ 11ಗಂಟೆವರೆಗೆ ಚಂದನ ವಾಹಿನಿಯಲ್ಲಿ ಈ ತರಗತಿಗಳು ಪ್ರಸಾರವಾಗುವುದಿದ್ದು, ಈ ತರಗತಿಗಳ ಮುದ್ರಿತ ಭಾಗವನ್ನು ಮಕ್ಕಳ ವಾಣಿ ಯೂ-ಟ್ಯೂಬ್ ವಾಹಿನಿಯಲ್ಲೂ ದೊರೆಯಲಿದೆ ಎಂದು ಸಚಿವರು ತಿಳಿಸಿದ್ದಾರೆ.

**1.20 ಲಕ್ಷಕ್ಕೂ ಹೆಚ್ಚು ಜನರಿಂದ ಇ– ಸಾರ್ವಜನಿಕ ಗ್ರಂಥಾಲಯ ಆಪ್ ಬಳಕೆ:**

ಕಳೆದ ನಾಲ್ಕು ತಿಂಗಳ ಹಿಂದೆ ಸಾರ್ವಜನಿಕ ಗ್ರಂಥಾಲಯ ಇಲಾಖೆ ಲೋಕಾರ್ಪಣೆಗೊಳಿಸಿದ ಇ–ಸಾರ್ವಜನಿಕ ಗ್ರಂಥಾಲಯ ಆಪ್ ನಿರೀಕ್ಷೆಗೂ ಮೀರಿ ಯಶಸ್ಸು ಕಂಡಿದ್ದು, 1.20 ಲಕ್ಷಕ್ಕೂ ಹೆಚ್ಚು ಜನರು ಈ ಆಪ್ ನ್ನು ಡೌನ್ ್ ಲೋಡ್ ಮಾಡಿ ಬಳಸುತ್ತಿದ್ದಾರೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ತಿಳಿಸಿದ್ದಾರೆ.

ಕೋವಿಡ್ ಸಂದರ್ಭದಲ್ಲಿ ಸೃಷ್ಟಿಯಾದ ಸಾಮಾಜಿಕ ಸ್ಥಿತಿಗತಿ ಹಿನ್ನೆಲೆಯಲ್ಲಿ ಅತ್ಯಂತ ಸಮಯೋಚಿತವಾಗಿ ರಾಜ್ಯ ಸಾರ್ವಜನಿಕ ಗ್ರಂಥಾಲಯ ಇಲಾಖೆ ಇಂತಹ ಉತ್ತಮ ಉಪಕ್ರಮವನ್ನು ಅನುಷ್ಠಾನಗೊಳಿಸಿದ್ದು, ಹೆಚ್ಚಿನ ಸದುಪಯೋಗವಾಗಿದೆ. ಈ ಸಂದರ್ಭದಲ್ಲಿ ಬೃಹತ್ ಸಂಖ್ಯೆಯ ಚಂದಾದಾರರು ಈ ಡಿಜಿಟಲ್ ಗ್ರಂಥಾಲಯದ ಅನುಕೂಲ ಪೆಡದುಕೊಂಡಿದ್ದಾರೆ.

ಇ–ಸಾರ್ವಜನಿಕ ಗ್ರಂಥಾಲಯ ಆಪ್ ನಲ್ಲಿ ಗ್ರಂಥಾಲಯಗಳಲ್ಲಿ ಲಭ್ಯವಿರುವ ಶಿಕ್ಷಣ, ಸಾಹಿತ್ಯ, ಸಾಂಸ್ಕೃತಿಕ, ನಾಟಕ, ಕಾದಂಬರಿ, ಕಥೆ ಸೇರಿದಂತೆ ಎಲ್ಲ ಪ್ರಾಕಾರಗಳ ಒಂದು ಲಕ್ಷಕ್ಕೂ ಹೆಚ್ಚು ಗ್ರಂಥಗಳಿದ್ದು, ಈ ಕೊರೋನಾ ಅವಧಿಯಲ್ಲಿ ಡಿಜಿಟಲ್ ಗ್ರಂಥಾಲಯದ ಅರಿವು ಹೆಚ್ಚೆಚ್ಚು ಜನರಿಗೆ ದೊರೆತಿದೆ ಎಂದು ಸಚಿವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಇದು ಭಾರತದಲ್ಲೇ ಒಂದು ಪ್ರಥಮವಾದ ವಿಶಿಷ್ಟ ಪ್ರಯೋಗವಾಗಿದ್ದು, ಇದರ ಬಳಕೆ ಇದರ ಯಶಸ್ಸನ್ನು ಅವಲಂಬಿಸಿದೆ ಎಂದು ಸಚಿವರು ತಿಳಿಸಿದ್ದಾರೆ. ರಾಜ್ಯದ ಜನರು ಇದರ ಸದುಪಯೋಗ ಪಡಿಸಿಕೊಂಡು ಇಲಾಖೆಯ ಈ ಉಪಕ್ರಮವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ನೀರಿನ ಬಿಲ್ ಪಾವತಿ** ಹಾಗೂ ಕಾಲರಾ ತಡೆಗಟ್ಟುವ ನಿಟ್ಟಿನಲ್ಲಿ ಕ್ರಮ

ಬೆಂಗಳೂರು ಜಲಮಂಡಳಿಯು ನೀರು ಸರಬರಾಜು ಕೊಳವೆಯಲ್ಲಿ ಸೋರುವಿಕೆಯನ್ನು ಸಾರ್ವಜನಿಕರಿಂದ ಅಥವಾ ಮಂಡಳಿಯ ಸಿಬ್ಬಂದಿಯವರು ಗುರುತಿಸಿದ ತಕ್ಷಣ ಸೋರುವಿಕೆ ತಡೆಗಟ್ಟಲು ಕ್ರಮವಹಿಸಲಾಗುತ್ತದೆ. ಇದಲ್ಲದೆ ಕಲುಷಿತ ನೀರು ಸರಬರಾಜಾಗುತ್ತಿದ್ದಲ್ಲಿ ತಕ್ಷಣ ಕ್ರಮವಹಿಸಿ ಕಲುಷಿತ ನೀರು ಸರಬರಾಜು ಕೊಳವೆಗೆ ಸೇರದಂತೆ ಕೂಡಲೇ ಕಾರ್ಯ ಪ್ರವೃತ್ತರಾಗಿ ಕ್ರಮವಹಿಸಲಾಗುತ್ತದೆ. **ಕಾಲರಾ ಮತ್ತು ಜಿ.ಇ**. ಗೆ ಸಂಬಂಧಿಸಿದ ಮಾಹಿತಿಯನ್ನು ಸಾಂಕ್ರಾಮಿಕ ರೋಗಗಳ ಆಸ್ಪತ್ರೆಯಿಂದ ದಿನಾಂಕ 01.05.2020 ರಿಂದ 08.05.2020 ರವರೆಗೆ ನೋಂದಣಿಯಾದ ಪ್ರಕರಣಗಳ ವಿಳಾಸವನ್ನು ಪಡೆದು ಅಂತಹ ಸ್ಥಳಗಳಿಂದ ನೀರಿನ ಮಾದರಿಯನ್ನು ಸಂಗ್ರಹಿಸಲಾಗಿ, ಕ್ರೋಢೀಕರಿಸಿದ ಫಲಿತಾಂಶದ ಸಂಪೂರ್ಣ ವಿವರವನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿರುವುದು. ಫಲಿತಾಂಶದ ಸಂಕ್ಷಿಪ್ತ ವಿವರ ಈ ಕೆಳಕಂಡಂತಿದೆ.

ದಿನಾಂಕ 01.05.2020 ರಿಂದ 08.05.2020 ರವರೆಗೆ ದಾಖಲುಗೊಂಡ ಒಟ್ಟು 31 ನೀರಿನ ಮಾದರಿಯನ್ನು ಸಂಗ್ರಹಿಸಿದ್ದು, 2 ಮಾದರಿಗೆ ಸಂಬಂಧಿಸಿದ ಪ್ರದೇಶಗಳಲ್ಲಿ ನೀರು ಸರಬರಾಜು ಇಲ್ಲದಿದ್ದ ಕಾರಣ ನೀರಿನ ಮಾದರಿಯನ್ನು ಸಂಗ್ರಹಿಸಿರುವುದಿಲ್ಲ, 25 ಮಾದರಿಗೆ ಸಂಬಂಧಿಸಿದ ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, 05 **ಮಾದರಿಯ ಫಲಿತಾಂಶವು ಕುಡಿಯಲು ಯೋಗ್ಯವಾಗಿರುತ್ತದೆ**. 20 ಮಾದರಿಯ ಫಲಿತಾಂಶವು ನಿರೀಕ್ಷಣೆಯಲ್ಲಿರುತ್ತದೆ. ಉಳಿದ 04 ಮಾದರಿಗಳಿಗೆ ಸಂಬಂಧಿಸಿದ ಪ್ರದೇಶಗಳು ಜಲ ಮಂಡಳಿಯ ವ್ಯಾಪ್ತಿಗೆ ಒಳಪಟ್ಟಿರುವುದಿಲ್ಲ.

ನಗರದಲ್ಲಿ ಕೋವಿಡ್ -19 ಹರಡುತ್ತಿರುವ ಹಿನ್ನೆಲೆಯಲ್ಲಿ ಅಂತರ ಕಾಯ್ದುಕೊಳ್ಳಬೇಕಾಗಿರುವ ಕಾರಣ ಜಲಮಂಡಳಿಯ ಮಾಪನ ಓದುಗರು ಮನೆಮನೆಗೆ ತೆರಳಿ ನೀರಿನ ಬಿಲ್‌ಅನ್ನು ವಿತರಿಸಲು ಸಾಧ್ಯವಾಗದಿರುವುದರಿಂದ ನೀರಿನ ಬಿಲ್‌ನ ಮಾಹಿತಿಯನ್ನು ಜಲಮಂಡಳಿಯಲ್ಲಿ ಲಭ್ಯವಿರುವ ಗ್ರಾಹಕರ ಮೊಬೈಲ್ ನಂಬರ್‌ಗಳಿಗೆ ವಾಚನ ದಿನವಹಿ ಎಸ್.ಎಂ.ಎಸ್.ಮುಖಾಂತರ ಕಳುಹಿಸಲಾಗುತ್ತಿದ್ದು, ಎಸ್.ಎಂ.ಎಸ್.ನಲ್ಲಿರುವ ಲಿಂಕ್ ಮುಖಾಂತರ ನೀರಿನ ಬಿಲ್‌ಅನ್ನು ಪಾವತಿಸಬಹುದಾಗಿರುತ್ತದೆ.

ಗ್ರಾಹಕರು ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ವಾಟ್ಸ್‌ಆಪ್ ಸಂಖ್ಯೆ:8762228888 ಗೆ ತಮ್ಮ ಹೆಸರು, ಆರ್.ಆರ್. ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆ ಯನ್ನು ಕಳುಹಿಸಿ ನೋಂದಾಯಿಸಿಕೊಂಡಲ್ಲಿ ನೀರಿನ ಬಿಲ್ಲಿನ ವಿವರವನ್ನು ತಮ್ಮ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮೂಲಕ ಕಳುಹಿಸಲಾಗುವುದು.

ಇದಲ್ಲದೆ ಜಲಮಂಡಳಿಯ ಅಧಿಕೃತ ವೆಬ್‌ಸೈಟ್ : www.bwssb.gov.in ನಲ್ಲಿ ಎಲ್ಲಾ ಗ್ರಾಹಕರ ಬಿಲ್‌ಗಳನ್ನು ವಾಚನ ದಿನವಹಿ ಪ್ರಕಟಿಸಲಾಗುತ್ತಿದ್ದು, ನೀರಿನ ಬಿಲ್ ಪಾವತಿಯನ್ನು ಮಂಡಳಿಯ ವೆಬ್‌ಸೈಟ್ ಮುಖಾಂತರ ಮಾಡಬಹುದಾಗಿರುತ್ತದೆ ಹಾಗೂ ಮಂಡಳಿಯ ಆ್ಯಪ್ ಆಗಿರುವ "BWSSB Payment App" ಮುಖಾಂತರ Quick Pay ಮಾಡಬಹುದಾಗಿರುತ್ತದೆ. ಮಂಡಳಿಯ ವೆಬ್‌ಸೈಟ್‌ನಲ್ಲಿ "BWSSB Payment App" ನ ಲಿಂಕ್ ಲಭ್ಯವಿದ್ದು, Google Play store ನಲ್ಲಿಯೂ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ಆನ್‌ಲೈನ್ ಪೇಮೆಂಟ್ ಸೇವೆಗಳಾದ BBPS(Bharat Bill Payment System)ನಿಂದ ಲಭ್ಯವಿರುವ Paytm, Phone-Pe, Google Pay, ಮುಖಾಂತರವಾಗಿಯೂ ನೀರಿನ ಬಿಲ್ ಪಾವತಿಯನ್ನು ಮಾಡಬಹುದಾಗಿರುತ್ತದೆ. ಗ್ರಾಹಕರು ಇದರ ಸದುಪಯೋಗಪಡಿಸಿಕೊಳ್ಳಲು ಕೋರಲಾಗಿದೆ.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ಸಹಾಯವಾಣಿಯ ಸಂಖ್ಯೆ:22238888 ಹಾಗೂ 1916 ಮತ್ತು ವಾಟ್ಸ್‌ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ. ತಮ್ಮ ಸಮೀಪದ ಸೇವಾಠಾಣೆಯ ದೂರವಾಣಿ ಸಂಖ್ಯೆಯನ್ನು ಮಂಡಳಿಯ ಅಧಿಕೃತ ವೆಬ್‌ಸೈಟ್:www.bwssb.gov.in ನಲ್ಲಿ ಪಡೆಯಬಹುದಾಗಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## Payment of water bills and steps taken to prevent cholera

****

BWSSB immediately take action to stop the leakage as soon as water leakages are detected and reported from public or from staff of BWSSB. Adding to this, if contamination of water is detected it is taken care that contaminated water does not get in contact to the water supply pipe lines. BWSSB collected address of the cases reported about Cholera and GE from Health & Family Welfare Department, Government Epidemic Disease Hospital, Bangalore, 01.05.2020 to 08.05.2020 tested the samples and results of the samples are enclosed with this letter. The abstract of the result is as mentioned below.

Among the 31 cases reported from 01.05.2020 to 08.05.2020, samples from 02 area was not collected since water supply for that area was not on the day when the water sample were collected, samples from 25 area were collected and result of **05 sample was obtained as suitable for potable purpose(SPP)**. Result of 20 sample is awaited. The areas of remaining 04 cases does not comes under BWSSB limits.

**Since COVID-19 is spreading in the city rapidly, in the view of maintaining social distance, BWSSB's meter reader cannot issue the bill by taking meter reading from each house. Water bill details are being sent through SMS reading day wise for the mobile numbers of customers that are available in the Board and payment can be made by clicking on the link provided in the SMS.**

**All customers are requested to register the details by sending their name, R.R. Number and mobile number to 24/7 BWSSB call center whatsapp number :8762228888 and thus water bill details will be sent to their registered mobile number through SMS**

**Along with this, water bills of all consumers are being published reading day wise in BWSSB official website: www.bwssb.gov.in and payment can be made through the website. BWSSB's App called "BWSSB Payment App" is also available and Quick Pay can be made through this app. Customers can login to the app via the link provided in BWSSB official website and app can also be downloaded from Google pay store. Payment can also be made through online services of BBPS (Bharath Bill Payment System) like Paytm, Phone pe, Google pay etc.**

It is also informed that BWSSB Call center number 080-22238888 is available 24/7 to receive the complaint of customers. Along with this, whatsapp number:8762228888 and toll free number 1916 is also available. Service station address and contact details can be obtained through BWSSB official **web site :www.bwssb.gov.in .**

## ಆಟೋ ಹಾಗೂ ಟ್ಯಾಕ್ಸಿ ಚಾಲಕರಿಗೆ ಪರಿಹಾರ

ಬೆಂಗಳೂರು, ಮೇ 8 ( ಕರ್ನಾಟಕ ವಾರ್ತೆ )

ರಾಜ್ಯಾದ್ಯಂತ ಕೊರೋನಾ ವೈರಾಣು (ಕೋವಿಡ್ –19) ಸಂಬಂಧ ಲಾಕ್ ಡೌನ್ ಹಿನ್ನೆಲೆಯಲ್ಲಿ ಆಟೋ ಹಾಗೂ ಟ್ಯಾಕ್ಸಿ ಚಾಲಕರುಗಳಿಗೆ ಒಂದು ಬಾರಿ ಪರಿಹಾರವಾಗಿ ರೂ. 5,000/– ಗಳನ್ನು ನೀಡಲಾಗುವುದು.

ಪರಿಹಾರಧನ ನೀಡಲು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ "ಸೇವಾಸಿಂಧು" ಪೋರ್ಟಲ್ ನ ಮೂಲಕ ಸ್ವೀಕರಿಸುವ ವ್ಯವಸ್ಥೆ ಮಾಡಲಾಗುತ್ತಿದೆ. ಆದ್ದರಿಂದ ಆಟೋರಿಕ್ಷಾ/ಟ್ಯಾಕ್ಸಿ ಚಾಲಕರುಗಳು ಅರ್ಜಿಗಳನ್ನು ಸಲ್ಲಿಸಲು ಅನವಶ್ಯಕವಾಗಿ ಪರಿಶ್ರಮ ಪಡುವ ಅವಶ್ಯಕತೆ ಇರುವುದಿಲ್ಲ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಆಟೋ/ಟ್ಯಾಕ್ಸಿ ಚಾಲಕರುಗಳಿಗೆ ಪರಿಹಾರಧನವನ್ನು ಅವರ ಖಾತೆಗೆ ನೇರವಾಗಿ ವರ್ಗಾಯಿಸಲಾಗುವುದು ಎಂದು ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಬೆಂಗಳೂರು ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.